ಕರ್ನಾಟಕ ಸರ್ಕಾರ
Government of karnataka
ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ
DEPARTMENT OF STATE EDUCATIONAL RESEARCH AND TRAINING
No 4, 100 FT RING ROAD, BANASHANKARI 3 RD STAGE BENGALURU - 560 085
Email: dpi.dsert-ka@nic.in Website: http://dsert.kar.nic.in
ಡಿಎಸ್ಇಆರ್‌ಟಿ
DSERT
Phone - 080 26980100
Fax - 080 26422377

# <u>ರಾಷ್ಟ್ರೀಯ ಶಿಕ್ಷಣ ನೀತಿ -2020</u>

# <u>ಕುರಿತು ಶೈಕ್ಷಣಿಕ ಕಾರ್ಯಗಾರ</u>

ರಾಷ್ಟ್ರೀಯ ಶಿಕ್ಷಣ ನೀತಿ-2020ರ ಕುರಿತು ಜಿಲ್ಲಾ ಮತ್ತು ಬ್ಲಾಕ್ ಸಂಪನ್ಮೂಲ ವ್ಯಕ್ತಿಗಳಿಗೆ ಹಾಗೂ ಕ್ಲಸ್ಟರ್ ಹಂತದಲ್ಲಿ ಎಲ್ಲಾ ಸಿ.ಆರ್.ಪಿ ಗಳಿಗೆ ಜಾಗೃತಿ ಮೂಡಿಸುವ ಸಂಬಂಧ ಸನ್ಮಾನ್ಯ ಶ್ರೀ ಬಿ.ಸಿ.ನಾಗೇಶ್, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ರವರ ಅಧ್ಯಕ್ಷತೆಯಲ್ಲಿ ದಿನಾಂಕ:03.03.2022ರಂದು ಟೆಲಿಕಾನ್ಫರೆನ್ಸ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಸದರಿ ಕಾರ್ಯಕ್ರಮದಲ್ಲಿ ಡಯಟ್ ಪ್ರಾಂಶುಪಾಲರು, ಹಿರಿಯ ಉಪನ್ಯಾಸಕರು, ಉಪನ್ಯಾಸಕರು, ಬಿ.ಆರ್.ಸಿ, ಬಿ.ಆರ್.ಪಿ, ಸಿ.ಆರ್.ಪಿಗಳು ಹಾಗೂ ಜಿಲ್ಲೆ ಮತ್ತು ಬ್ಲಾಕ್ ಹಂತದ ಸಂಪನ್ಮೂಲ ವ್ಯಕ್ತಿಗಳು ಭಾಗವಹಿಸಿರುತ್ತಾರೆ.

ಟೆಲಿಕಾನ್ಫರೆನ್ಸ್ ಕಾರ್ಯಕ್ರಮದಲ್ಲಿ ಶ್ರೀಮತಿ ಸುಮಂಗಲ, ನಿರ್ದೇಶಕರು ಡಿ.ಎಸ್.ಇ.ಆರ್.ಟಿ ಇವರು ಟೆಲಿಕಾನ್ಫರೆನ್ಸ್ ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲರಿಗೂ ತರಬೇತಿಯ ಉದ್ದೇಶವನ್ನು ತಿಳಿಸುವುದರ ಮೂಲಕ ಮಾನ್ಯ ರಾಜ್ಯ ಯೋಜನಾ ನಿರ್ದೇಶಕರನ್ನು, ಸಂಪನ್ಮೂಲ ವ್ಯಕ್ತಿಗಳನ್ನು ಹಾಗೂ ಜಿಲ್ಲೆ ಮತ್ತು ಬ್ಲಾಕ್ ಸ್ವೀಕೃತಿ ಕೇಂದ್ರಗಳಲ್ಲಿ ಹಾಜರಿದ್ದ ಎಲ್ಲರನ್ನು ಸ್ವಾಗತಿಸಿದರು.



ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು ಎನ್.ಇ.ಪಿ-2020ರ ಟೆಲಿಕಾನ್ಫರೆನ್ಸ್ ಸಭೆಯಲ್ಲಿ ಪ್ರಾಸ್ತಾವಿಕ ಹಾಗೂ ಆಶಯ ನುಡಿಯಲ್ಲಿ ಎನ್.ಇ.ಪಿ - 2020ರ 08 ಅಧ್ಯಾಯಗಳಲ್ಲಿನ ಮಾಹಿತಿಯನ್ನು ಸಂಕ್ಷಿಪ್ತವಾಗಿ ವಿವರಿಸಿದರು. ಎನ್.ಇ.ಪಿ - 2020ರ 08 ಅಧ್ಯಾಯಗಳಲ್ಲಿ ಪ್ರಸ್ತಾಪಿಸಲಾಗಿರುವ ವಿಷಯಗಳ ಕುರಿತು ಟೆಲಿಕಾನ್ಫರೆನ್ಸ್ ಮೂಲಕ ತರಬೇತಿ ಪಡೆಯುವ ಸಂಪನ್ಮೂಲ ವ್ಯಕ್ತಿಗಳು ಸದ್ಬಳಕೆಗೆ ಮಾಡಿಕೊಂಡು ಶಿಕ್ಷಕರಿಗೆ ತರಬೇತಿ ನೀಡಲು ಕಾರ್ಯತತ್ಪರರಾಗುವಂತೆ ತಿಳಿಸಿದರು.




ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ ಶ್ರೀಮತಿ ಮಂಗಳ.ಜಿ, ಹಿರಿಯ ಸಹಾಯಕ ನಿರ್ದೇಶಕರು, ಡಿ.ಎಸ್.ಇ.ಆರ್.ಟಿ., ಬೆಂಗಳೂರು., ಶ್ರೀ ರಾಘವೇಂದ್ರ, ಉಪನ್ಯಾಸಕರು, ಡಯಟ್ ಕೋಲಾರ, ಡಾ. ಜಿ.ವಿ ಹರಿಪ್ರಸಾದ್, ಹಿರಿಯ ಉಪನ್ಯಾಸಕರು, ಡಯಟ್ ಶಿವಮೊಗ್ಗ., ಶ್ರೀಮತಿ ಪ್ರಮಿತ ಆದೋನಿ, ಕಾರ್ಯಕ್ರಮಾಧಿಕಾರಿ, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು., ಡಾ. ಹೆಚ್.ಬಿ.ಚಂದ್ರಶೇಖರ್, ಶಿಕ್ಷಣ ಸಚಿವರ ವಿಶೇಷಾಧಿಕಾರಿಗಳು, ಶ್ರೀ ವೇದಮೂರ್ತಿ .ಸಿ, ಹಿರಿಯ ಉಪನ್ಯಾಸಕರು, ಡಯಟ್ ತುಮಕೂರು ಇವರು ಎನ್.ಇ.ಪಿ-2020ರ 08 ಅಧ್ಯಾಯಗಳ ಬಗ್ಗೆ ಮಾಹಿತಿ ವಿನಿಮಯ ಮಾಡಿಕೊಳ್ಳುವುದರ ಮೂಲಕ ತರಬೇತಿಯನ್ನು ನೀಡಿದರು.











ಕಾರ್ಯಕ್ರಮದ ಕೊನೆಯ ಅವಧಿಯಲ್ಲಿ ಸ್ವೀಕೃತಿ ಕೇಂದ್ರಗಳಿಂದ ಬಂದ ಪ್ರಶ್ನೆಗಳಿಗೆ ಸಂಪನ್ಮೂಲ ವ್ಯಕ್ತಿಗಳು ಸೂಕ್ತ ಉತ್ತರವನ್ನು ನೀಡುವುದರ ಮೂಲಕ ನಿರ್ವಹಿಸಲಾಯಿತು ಹಾಗೂ ಮುಂದಿನ ಹಂತದಲ್ಲಿ ತರಬೇತಿಯನ್ನು ಸಮರ್ಪಕವಾಗಿ ನಿರ್ವಹಿಸಲು ಸೂಚಿಸುವುದರ ಮೂಲಕ ಕಾರ್ಯಕ್ರಮವನ್ನು ಅಂತಿಮಗೊಳಿಸಲಾಯಿತು.

ನಿರ್ದೇಶಕರು
ಡಿ.ಎಸ್.ಇ.ಆರ್.ಟಿ ಬೆಂಗಳೂರು